ಹಾಗೂ ಅಗತ್ಯವಿದ್ದಲ್ಲಿ ಅತಿಥಿ ಶಿಕ್ಷಕರನ್ನು ನೇಮಿಸಲು ಕ್ರಮ ತೆಗೆದುಕೊಳ್ಳಲಾಗುವುದು.

ಉ) ಯಾವುದೇ ತೊಂದರೆ ಇಲ್ಲ.

ಊ) ಇಲ್ಲ

ಋ) ಉಪಪ್ರಶ್ನೆ "ಈ" ಗೆ ನೀಡಿರುವ ಉತ್ತರದಿಂದಾಗಿ ಉದ್ಭವಿಸುವುದಿಲ್ಲ.

ಕುಡಿಯುವ ನೀರಿನ ಯೋಜನೆ

34(254) ಶ್ರೀ ಕರಡಿ ಸಂಗಣ್ಣ ಅಮರಪ್ಪ:(ಕೊಪ್ಪಳ) ಮಾನ್ಯ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನಬಾರ್ಡ್‌ನ ವಿಶ್ವಬ್ಯಾಂಕ್ ನೆರವಿನೊಂದಿಗೆ ಕೊಪ್ಪಳ ತಾಲ್ಲೂಕಿನ 16 ಹಳ್ಳಿಗಳಿಗೆ ಕುಡಿಯುವ ನೀರಿನ ಯೋಜನೆ ಮಂಜೂರಾತಿ ದೊರಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಯೋಜನೆಯು ಸಮರ್ಪಕವಾಗಿ ಕಾರ್ಯನಿರ್ವಹಿಸದೆ ಕುಂಠಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಯೋಜನೆಗೆ ತಾಂತ್ರಿಕ ತೊಂದರೆಗಳೇನು

ಇ) ಹಾಗಿದ್ದಲ್ಲಿ. ತೊಂದರೆಯನ್ನು ನಿವಾರಿಸಲು ಸರ್ಕಾರವು ಕೈಗೊಂಡು ಕ್ರಮಗಳೇನು?

ಶ್ರೀ ಜಗದೀಶ್ ಶೆಟ್ಟರ್(ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):

ಅ) ಬಂದಿದೆ

ಆ) ಈ ಯೋಜನೆಯಡಿ ಸೇರ್ಪಡೆಯಾದ ಒಟ್ಟು 16 ಗ್ರಾಮಗಳ ಪೈಕಿ 10 ಗ್ರಾಮಗಳಿಗೆ ನೀರು ಪೂರೈಸಿ, ನಿರ್ವಹಣೆಗಾಗಿ ಸಂಬಂಧಪಟ್ಟ ನೀರು ಸರಬರಾಜು ಸಮಿತಿಗಳಿಗೆ ಹಸ್ತಾಂತರಿಸಲಾಗಿದೆ. ಬಾಕಿ ಉಳಿದ 6 ಗ್ರಾಮಗಳಿಗೆ ಪೈಪುಗಳ ಮೂಲಕ ನೀರು ಹರಿಬಿಟ್ಟು, ಪರೀಕ್ಷೆ ಮಾಡಲು ತುಂಗಭದ್ರ ನದಿಯಲ್ಲಿ ನೀರು ಕಡಿಮೆ ಇದ್ದುರಿಂದ ಹಾಗೂ ಎಕ್ಸಪ್ರೆಸ್ ಫೀಡರ್ ಲೈನ್ ಇಲ್ಲದೇ

ಇದ್ದುದರಿಂದ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಿ ಸದರಿ 6 ಗ್ರಾಮಗಳಿಗೆ ನೀರು ಸರಬರಾಜು ಮಾಡಲು ಸಾಧ್ಯವಾಗಿಲ್ಲ.

ಇ) ಈ ತಾಂತ್ರಿಕ ತೊಂದರೆಯನ್ನು ನಿವಾರಿಸಲು ಜಾಕ್‌ವೆಲ್ ಹತ್ತಿರ ಕೊಳವೆಬಾವಿಗಳನ್ನು ತುಂಗಭದ್ರ ನದಿಯ ದಂಡೆಯಲ್ಲಿ ಕೊರೆದು ಅವುಗಳಿಗೆ ಪಂಪುಗಳನ್ನು ಅಳವಡಿಸಿ, ಬೇಸಿಗೆಯಲ್ಲಿ ಸಹ ನೀರು ಪೂರೈಸಲು ಕ್ರಮಕೈಗೊಳ್ಳಲಾಗಿದೆ. ಆದಾಗ್ಯೂ ಪೈಪುಗಳಲ್ಲಿ ನೀರು ಸೋರುವಿಕೆಯಾಗಿ, ಫಲಕಾರಿಯಾಗಿಲ್ಲ. ಆದುದರಿಂದ ಪೈಪುಗಳ ದುರಸ್ತಿ ಹಾಗೂ ಕೆ.ಪಿ.ಟಿ.ಸಿ.ಎಲ್.ನ ರೂ.30.00 ಲಕ್ಷ ಬಾಕಿ ಬಿಲ್ ಪಾವತಿ ಕುರಿತು ಜಿಲ್ಲಾ ಪಂಚಾಯಿತಿ ಕ್ರಮವಹಿಸುತ್ತಿದೆ.

ಪದವಿ ಪೂರ್ವ ಕಾಲೇಜಿನಲ್ಲಿ ಕೊಠಡಿಗಳ ಕೊರತೆ.

35(116) ಶ್ರೀ ಎಂ.ಶ್ರೀನಿವಾಸ್:(ಮಂಡ್ಯ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಡ್ಯ ನಗರದ ಬಾಲಕಿಯರ ಪದವಿ ಪೂರ್ವ ಕಾಲೇಜಿನಲ್ಲಿ ಕೊಠಡಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಕೊರತೆಯಿರುವ ಕೊಠಡಿಗಳನ್ನು ನಿರ್ಮಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ವಿದ್ಯಾರ್ಥಿಗಳಿಗೆ ಪಾಠ ಪ್ರವಚನಗಳಿಗೆ ಹಾಗೂ ಪ್ರಯೋಗ ಶಾಲೆಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ

ಇ) ಹಾಗಿದ್ದಲ್ಲಿ ಈ ತೊಂದರೆಯನ್ನು ನಿವಾರಿಸಲು ಸರ್ಕಾರ ಜರೂರು ಕ್ರಮ ಕೈ ಗೊಳ್ಳುವುದೇ;

ಈ) ಹಾಗಿದ್ದಲ್ಲಿ, ಎಂದಿನಿಂದ ಕೊಠಡಿಗಳ ಕಾಮಗಾರಿ ಕೈ ಗೋಳ್ಳಲಾಗುವುದು? ವಿವರಗಳನ್ನು ನೀಡುವುದು.

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ(ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):

ಅ) ಬಂದಿದೆ